# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಟಿ.ರೇವಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ರದುರ್ಗ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್/ ಉಪಲೋಕ್ / ಬಿಡಿ-1363/2012/ಎಆರ್‌ಇ-8, ದಿನಾಂಕ: 29-11 -2012.

-----

**ಪ್ರಸ್ತಾವನೆ**

ಶ್ರೀ ಟಿ. ರೇವಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ರದುರ್ಗ ರವರ ವಿರುದ್ಧ ಕರ್ನಾಟಕ ಉಪ ಲೋಕಾಯುಕ್ತ ರವರು ತನಿಖೆ ನಡೆಸಿ ಲೋಕಾಯುಕ್ತ ಕಾಯ್ದೆ ಕಲಂ 12 (3)ರ ಮೂಲ ತನಿಖಾ ವರದಿಯನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಕಳುಹಿಸಿ, ಅದರ ಶಿಫಾರಸ್ಸಿನನ್ವಯ ಸಕ್ಷಮ ಪ್ರಾಧಿಕಾರವು ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಕ್ರಮದ ಬಗ್ಗೆ ಮೂರು ತಿಂಗಳೊಳಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12 (4)ರ ಪ್ರಕಾರ ವರದಿ ಮಾಡಬೇಕೆಂದು ಮೇಲೆ ಓದಲಾದ ದಿನಾಂಕ. 29-11-2012ರ ಪತ್ರದಲ್ಲಿ ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ತಿಳಿಸಿರುತ್ತಾರೆ.

ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ ಟಿ.ರೇವಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ರದುರ್ಗ ರವರು ಚಿತ್ರದುರ್ಗ ತಾಲ್ಲೂಕು ದೊಡ್ಡಸಿದ್ಧವನಹಳ್ಳಿ ಗ್ರಾಮದ ಬಳಿ ಅಂತರ್ಜಲ ಅಭಿವೃದ್ಧಿ ಕಾಮಗಾರಿಗಾಗಿ ಚೆಕ್ ಡ್ಯಾಂ ಅನ್ನು ನಿರ್ಮಿಸುವ ಕಾಮಗಾರಿಯನ್ನು ಪೂರ್ಣಗೊಳಿಸಿದ್ದು, ಇದರ ಬಿಲ್ ತಯಾರಿಸಲು ಫಿರ್ಯಾದುದಾರರಾದ ಶ್ರೀ ಎನ್.ಬಿ.ಮಂಜುನಾಥ್, ಚಿತ್ರದುರ್ಗ ಇವರಿಂದ ರೂ. 20,000/- ಗಳ ಅಕ್ರಮ ಸಂಭಾವನೆಯನ್ನು ಪಡೆದಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಕರ್ನಾಟಕ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಶ್ರೀ ಟಿ.ರೇವಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ರದುರ್ಗ ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

---2

ಆದೇಶ ಸಂಖ್ಯೆ ಗ್ರಾಅಪ 33 ಇಎನ್‌ಕ್ಯೂ 2012, ಬೆಂಗಳೂರು, ದಿನಾಂಕ.21-01-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಟಿ.ರೇವಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ರದುರ್ಗ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ;
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಉಪ ಲೋಕಾಯುಕ್ತ ಕಚೇರಿ, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-8 ,ಕರ್ನಾಟಕ ಉಪ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಕರ್ನಾಟಕ ಉಪ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
6. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
9. ಮಾನ್ಯ ಉಪ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿ.
10. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು – ಸಿ).
11. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿತ್ರದುರ್ಗ.
12. ಶ್ರೀ ಟಿ.ರೇವಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ರದುರ್ಗ.
13. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.